ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ಸಂಜೆವಾಣಿ    ದಿನಾಂಕ : DATE : 27/11/20

# ಮೂರ್ತಿ ವಿರುದ್ಧ ಇಲಾಖಾ ವಿಚಾರಣೆ ಮುಂದುವರಿಕೆ

ಬೆಂಗಳೂರು: ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ 2016 ಹಾಗೂ 2017ನೇ ಸಾಲಿನಲ್ಲಿ ನಡೆದಿದ್ದ ಅಧಿವೇಶನದ ವೇಳೆ ಕೈಗೊಂಡ ಕಾಮಗಾರಿ ಹಾಗೂ ಇತರೆ ವೆಚ್ಚಗಳಲ್ಲಿ ಅವ್ಯವಹಾರ ನಡೆಸಿದ್ದಾರೆ ಎಂಬ ಆರೋಪದ ಮೇಲೆ ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿಯಾಗಿದ್ದ ಎಸ್. ಮೂರ್ತಿ ವಿರುದ್ಧ ಆದೇಶಿಸಿದ್ದ ಇಲಾಖಾ ವಿಚಾರಣೆಯನ್ನು ಮುಂದುವರೆಸಲು ಸಚಿವಾಲಯ ಆದೇಶ ಹೊರಡಿಸಿದೆ. ಪ್ರಸ್ತುತ ಅಮಾನತಿನಲ್ಲಿರುವ ಎಸ್. ಮೂರ್ತಿ ಅವರ ವಿರುದ್ಧ ಬಂದಿದ್ದ ಅಕ್ರಮಗಳ ಆರೋಪದ ಹಿನ್ನೆಲೆಯಲ್ಲಿ ತನಿಖೆಗೆ ಆದೇಶಿಸಿತ್ತು. ಇದೀಗ ನವೆಂಬರ್ 20ರಂದು ಇಲಾಖಾ ವಿಚಾರಣೆ ಮುಂದುವರೆಸಲು ಆದೇಶಿಸಿದ್ದು, ದಂಡನಾಧಿಕಾರಿಯನ್ನಾಗಿ ಹಿರಿಯ ವಕೀಲ ಕೆ.ವಿ. ನರಸಿಂಹನ್ ಅವರನ್ನು ನೇಮಿಸಲಾಗಿದೆ ಎಂದು ಕರ್ನಾಟಕ ವಿಧಾನಸಭೆ ಸಚಿವಾಲಯದ ಅಧೀನ ಕಾರ್ಯದರ್ಶಿ ಆದೇಶದಲ್ಲಿ ತಿಳಿಸಿದ್ದಾರೆ.

